# ಬಾಕಿ ಹಣ ನೀಡದೆ ಅಮಾಯಕರ ಮೇಲೆ ಸುಳ್ಳು ಕೇಸ್ ಹಾಕಿ ಆರೋಪ:ಸಿಸಿಟಿವಿ ಕೇಸ್‌ಗೆ ಬಿಗ್ ಟ್ವಿಸ್ಟ್




**ಬೆಂಗಳೂರು:** ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ ಪಂದ್ಯಗಳ ವೇಳೆ ಸಿಸಿಟಿವಿ ವೈರ್ ಕಟ್ ಮಾಡಲಾಗಿದೆ ಎಂಬ ಆರೋಪ ರಾಜ್ಯದಾದ್ಯಂತ ಸಾಕಷ್ಟು ಚರ್ಚೆಗೆ ಕಾರಣವಾಗಿತ್ತು. ಭದ್ರತಾ ಲೋಪ, ದುಷ್ಕೃತ್ಯ ಹಾಗೂ ಕ್ರೀಡಾಂಗಣದ ಸುರಕ್ಷತೆ ಕುರಿತಾಗಿ ಗಂಭೀರ ಪ್ರಶ್ನೆಗಳು ಎದ್ದಿದ್ದವು. ಆದರೆ ಇದೀಗ ಈ ಪ್ರಕರಣಕ್ಕೆ ಅಚ್ಚರಿಯ ತಿರುವು ಸಿಕ್ಕಿದ್ದು, ಸಿಸಿಟಿವಿ ವೈರ್ ಕಟ್ ಆರೋಪದ ಹಿಂದೆ ಹಣಕಾಸಿನ ವ್ಯವಹಾರ, ಬಾಕಿ ಹಣದ ವಿವಾದ ಹಾಗೂ ಕಂಪನಿಗಳ ನಡುವಿನ ಒಳಜಗಳವೇ ಕಾರಣ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಹೊರಬರುತ್ತಿರುವ ಮಾಹಿತಿಗಳ ಪ್ರಕಾರ, ಕ್ರೀಡಾಂಗಣದಲ್ಲಿ ಯಾವುದೇ ರೀತಿಯ ಭದ್ರತಾ ಸಂಚು ಅಥವಾ ಉದ್ದೇಶಪೂರ್ವಕ ದುಷ್ಕೃತ್ಯ ನಡೆದಿಲ್ಲ. ಬದಲಾಗಿ ಹಲವು ಕೋಟಿ ರೂಪಾಯಿಗಳ ಟೆಂಡರ್, ಬಾಕಿ ಹಣ ಪಾವತಿ ಹಾಗೂ ಗುತ್ತಿಗೆದಾರ ಕಂಪನಿಗಳ ನಡುವಿನ ವಿವಾದವನ್ನು ಮುಚ್ಚಿಹಾಕಲು ಅಮಾಯಕ ಸಿಬ್ಬಂದಿಯ ಮೇಲೆ ಸುಳ್ಳು ಆರೋಪ ಹೊರಿಸಲಾಗಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

7 ಕೋಟಿ ರೂಪಾಯಿಗಳ ಭದ್ರತಾ ಯೋಜನೆ: ಐಪಿ-ಎಲ್ ಪಂದ್ಯಾವಳಿಯ ಸಂದರ್ಭದಲ್ಲಿ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಆರ್‌ಸಿಬಿ ಮತ್ತು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಏಖಅಂ) ಸಹಯೋಗದಲ್ಲಿ ಸುಮಾರು 7 ಕೋಟಿ ರೂಪಾಯಿಗಳ ಭದ್ರತಾ ಯೋಜನೆ ರೂಪಿಸಲಾಗಿತ್ತು.

ಈ ಯೋಜನೆಯಡಿ ಕ್ರೀಡಾಂಗಣದ ವಿವಿಧ ಭಾಗಗಳಲ್ಲಿ ಆಧುನಿಕ ಸಿಸಿಟಿವಿ ಕ್ಯಾಮೆರಾಗಳು, ನಿಗಾ ವ್ಯವಸ್ಥೆಗಳು ಹಾಗೂ ಭದ್ರತಾ ತಂತ್ರಜ್ಞಾನಗಳನ್ನು ಅಳವಡಿಸುವ ಜವಾಬ್ದಾರಿಯನ್ನು ವಿವಿಧ ಕಂಪನಿಗಳಿಗೆ ವಹಿಸಲಾಗಿತ್ತು.

ಮೂಲಗಳ ಪ್ರಕಾರ ಹರಿಯಾಣ ಮೂಲದ ಸ್ಟಾಕು ಸಂಸ್ಥೆಗೆ ಸುಮಾರು 4.5 ಕೋಟಿ ರೂಪಾಯಿಗಳ ಟೆಂಡರ್ ನೀಡಲಾಗಿತ್ತು. ಬಳಿಕ ಎರಡನೇ ಹಂತದ ಕೆಲಸಕ್ಕಾಗಿ ಗುಜರಾತ್ ಮೂಲದ ಟೆಕ್‌ಸ್ಟಿಚ್ ಸಂಸ್ಥೆ ಸೇರಿಕೊಂಡಿತ್ತು. ಅಂತಿಮವಾಗಿ ಪುಣೆ ಮೂಲದ ಐವಿಎಸ್ ಟೆಕ್ ಸೆಕ್ಯೂರ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಸಿಸಿಟಿವಿ ಅಳವಡಿಕೆ ಹಾಗೂ ನಿರ್ವಹಣೆಯ ಜವಾಬ್ದಾರಿ ವಹಿಸಲಾಗಿತ್ತು.

1.2 ಕೋಟಿ ರೂಪಾಯಿಯ ಕೆಲಸ ಪೂರ್ಣ: ಐವಿ-ಎಸ್ ಸಂಸ್ಥೆಯು ತನ್ನ ಬೆಂಗಳೂರು ಮೂಲದ ತಾಂತ್ರಿಕ ಸಿಬ್ಬಂದಿಯ ಮೂಲಕ ಕ್ರೀಡಾಂಗಣದಲ್ಲಿ ಸಿಸಿಟಿವಿ ವ್ಯವಸ್ಥೆ ಅಳವಡಿಸುವ ಕೆಲಸವನ್ನು ಕೈಗೊಂಡಿತ್ತು. ಸುಮಾರು 1.2 ಕೋಟಿ ರೂಪಾಯಿಗಳ ವೆಚ್ಚದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಮೆರಾಗಳನ್ನು ಅಳವಡಿಸಿ, ತಾಂತ್ರಿಕ ವ್ಯವಸ್ಥೆಯನ್ನು ಸಿದ್ಧಪಡಿಸಲಾಗಿತ್ತು.

ಕಂಪನಿಯ ಸಿಬ್ಬಂದಿ ಸಮಯಕ್ಕೆ ಸರಿಯಾಗಿ ಕೆಲಸ ಪೂರ್ಣಗೊಳಿಸಿ ಪಂದ್ಯಗಳಿಗೆ ಅಗತ್ಯವಿರುವ ತಾಂತ್ರಿಕ ಬೆಂಬಲವನ್ನೂ ಒದಗಿಸಿದ್ದರು ಎನ್ನಲಾಗಿದೆ. ಆದರೆ ಕೆಲಸ ಪೂರ್ಣಗೊಂಡ ಬಳಿಕ ಪಾವತಿ ವಿಚಾರದಲ್ಲಿ ಸಮಸ್ಯೆ ಆರಂಭವಾಗಿದೆ ಎಂದು ಆರೋಪಿಸಲಾಗಿದೆ.

40 ಲಕ್ಷ ರೂಪಾಯಿ ಬಾಕಿ: ಮೂರು ಐಪಿಎಲ್ ಪಂದ್ಯಗಳು ಯಶಸ್ವಿಯಾಗಿ ನಡೆದ ಬಳಿಕ ಗುತ್ತಿಗೆ ನೀಡಿದ ಕಂಪನಿಗಳು ಸುಮಾರು 1 ಕೋಟಿ ರೂಪಾಯಿ ಪಾವತಿಸಿವೆ. ಆದರೆ ಉಳಿದ 40 ಲಕ್ಷ ರೂಪಾಯಿ ಹಣವನ್ನು ಹಲವು ಬಾರಿ ಕೇಳಿದರೂ ಬಿಡುಗಡೆ ಮಾಡಲಿಲ್ಲ ಎಂಬ ಆರೋಪ ಕೇಳಿಬಂದಿದೆ.

ಐವಿಎಸ್ ಸಂಸ್ಥೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಲವು ಬಾರಿ ಬಾಕಿ ಹಣ ಬಿಡುಗಡೆ ಮಾಡುವಂತೆ ಮನವಿ ಮಾಡಿದರೂ ಯಾವುದೇ ಸ್ಪಷ್ಟ ಪ್ರತಿಕ್ರಿಯೆ ಸಿಗಲಿಲ್ಲ ಎನ್ನಲಾಗಿದೆ. ಇದೇ ವಿಚಾರ ಮುಂದಿನ ವಿವಾದಕ್ಕೆ ಕಾರಣವಾಗಿದೆ ಎಂದು ಹೇಳಲಾಗುತ್ತಿದೆ.

ಅಂತಿಮ ಪಂದ್ಯದ ವೇಳೆ ಪವರ್ ಸಮಸ್ಯೆ: ಐಪಿ-ಎಲ್‌ನ ಕೊನೆಯ ಪಂದ್ಯಕ್ಕೂ ಮುನ್ನ ಕ್ರೀಡಾಂಗಣದಲ್ಲಿ ವಿದ್ಯುತ್ ಪೂರೈಕೆಗೆ ಸಂಬಂಧಿಸಿದ ತಾಂತ್ರಿಕ ಸಮಸ್ಯೆ ಎದುರಾಗಿತ್ತು. ಇದರ ಪರಿಣಾಮವಾಗಿ ಕೆಲವು ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸದೇ ಆಫ್ ಆಗಿದ್ದವು ಎಂದು ತಿಳಿದುಬಂದಿದೆ.

ಈ ಸಂದರ್ಭದಲ್ಲಿ ಐವಿಎಸ್ ಸಂಸ್ಥೆಯು ಬಾಕಿ ಹಣದ ವಿಚಾರವನ್ನು ಮತ್ತೊಮ್ಮೆ ಪ್ರಸ್ತಾಪಿಸಿದರೂ, ಪಂದ್ಯಕ್ಕೆ ಯಾವುದೇ ಅಡ್ಡಿಯಾಗಬಾರದು ಎಂಬ ಕಾರಣಕ್ಕಾಗಿ ತಾಂತ್ರಿಕ ಸಿಬ್ಬಂದಿಯನ್ನು ಸ್ಥಳಕ್ಕೆ ಕಳುಹಿಸಿತ್ತು.

ಅಬ್ದುಲ್ ಕಲಾಂ ಹಾಗೂ ಮಂಜುನಾಥ್ ಎಂಬ ಇಬ್ಬರು ಸಿಬ್ಬಂದಿ ಸಮಸ್ಯೆ ಪರಿಹರಿಸಲು ಕ್ರೀಡಾಂಗಣಕ್ಕೆ ತೆರಳಿದ್ದರು. ಆದರೆ ಸಮಸ್ಯೆ ಗಂಭೀರವಾಗಿದ್ದ ಕಾರಣ ತಕ್ಷಣವೇ ಸರಿಪಡಿಸಲು ಸಾಧ್ಯವಾಗಿರಲಿಲ್ಲ. ಹೀಗಾಗಿ ಹೆಚ್ಚಿನ ತಾಂತ್ರಿಕ ತಂಡವನ್ನು ಕರೆತರಲು ಅವರು ಅಲ್ಲಿಂದ ಹಿಂದಿರುಗಿದ್ದರು ಎನ್ನಲಾಗಿದೆ.

ಸಿಸಿಟಿವಿ ದೃಶ್ಯ ಬಳಸಿ ಆರೋಪ:ಈ ವೇಳೆ ದಾಖಲಾಗಿದ್ದ ಸಿಸಿಟಿವಿ ದೃಶ್ಯಗಳನ್ನು ಆಧಾರವಾಗಿಸಿಕೊಂಡು ಸ್ಟಾಕು ಸಂಸ್ಥೆಯ ಆದಿತ್ಯ ಭಟ್ ಎಂಬುವರು ಇಬ್ಬರು ಸಿಬ್ಬಂದಿ ಸಿಸಿಟಿವಿ ವೈರ್ ಕಟ್ ಮಾಡಿದ್ದಾರೆ ಎಂದು ಆರೋಪಿಸಿ ದೂರು ನೀಡಿದ್ದಾರೆ ಎನ್ನಲಾಗಿದೆ.

ಆದರೆ ಐವಿಎಸ್ ಸಂಸ್ಥೆಯ ಅಧಿಕಾರಿಗಳು ಈ ಆರೋಪವನ್ನು ಸಂಪೂರ್ಣವಾಗಿ ತಳ್ಳಿಹಾಕಿದ್ದು, ಇಬ್ಬರು ಸಿಬ್ಬಂದಿ ಕೇವಲ ತಾಂತ್ರಿಕ ದೋಷ ಸರಿಪಡಿಸಲು ತೆರಳಿದ್ದರು. ಅವರು ಯಾವುದೇ ವೈರ್ ಕಟ್ ಮಾಡಿಲ್ಲ ಎಂದು ವಾದಿಸಿದ್ದಾರೆ.

ಬಾಕಿ ಹಣ ಪಾವತಿಸುವುದನ್ನು ತಪ್ಪಿಸಲು ಹಾಗೂ ಕಂಪನಿಗಳ ನಡುವಿನ ಗೊಂದಲವನ್ನು ಮುಚ್ಚಿಹಾಕಲು ಅಮಾಯಕ ಸಿಬ್ಬಂದಿಯ ಮೇಲೆ ಸುಳ್ಳು ಆರೋಪ ಹೊ-ರಿಸಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಎಐ ಕ್ಯಾಮೆರಾ ಹೆಸರಿನಲ್ಲಿ ವಂಚನೆ?: ಈ ಪ್ರಕರಣದ ಮತ್ತೊಂದು ಪ್ರಮುಖ ಆಯಾಮವೆಂದರೆ ಎಐ) ಕ್ಯಾಮೆರಾಗಳ ಅಳವಡಿಕೆ ಸಂಬಂಧ ಕೇಳಿಬರುತ್ತಿರುವ ಆರೋಪ.

ಕಾಲ್ತುಳಿತ ದುರಂತಗಳಂತಹ ಘಟನೆಗಳ ಬಳಿಕ ನ್ಯಾಯಾಲಯವು ಕ್ರೀಡಾಂಗಣಗಳಲ್ಲಿ ಕಟ್ಟುನಿಟ್ಟಿನ ಭದ್ರತಾ ಕ್ರಮ ಹಾಗೂ ಎಸ್‌ಒಪಿ ಅನುಸರಿಸಲು ಸೂಚಿಸಿತ್ತು. ಅದರಂತೆ ಎಐ ಆಧಾರಿತ ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದೆ ಎಂದು ಹೇಳಲಾಗಿತ್ತು.

ಆದರೆ ವಾಸ್ತವದಲ್ಲಿ ಎಐ ಸಾಮರ್ಥ್ಯ ಹೊಂದಿದ ಕ್ಯಾಮೆರಾಗಳ ಬದಲಿಗೆ ಕೇವಲ ಜನರ ಸಂಖ್ಯೆಯನ್ನು ಎಣಿಸಬಲ್ಲ ಸಾಮಾನ್ಯ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ ಎಂದು ಐವಿಎಸ್ ಸಂಸ್ಥೆಯ ಪ್ರಾಜೆಕ್ಟ್ ಮ್ಯಾನೇಜರ್ ವರುಣ್ ಹಾಗೂ ಸಿಬ್ಬಂದಿ ಅಚ್ಚುತ್ ಆರೋಪಿಸಿದ್ದಾರೆ.

ಅವರ ಪ್ರಕಾರ, ಕೇವಲ 1.5 ಕೋಟಿ ರೂಪಾಯಿಗಳ ಬಜೆಟ್‌ನಲ್ಲಿ ಸಂಪೂರ್ಣ ಎಐ ಆಧಾರಿತ ನಿಗಾ ವ್ಯವಸ್ಥೆ ಅಳವಡಿಸುವುದು ತಾಂತ್ರಿಕವಾಗಿ ಸಾಧ್ಯವಿಲ್ಲ. ಆದರೂ ಕಾಗದದ ಮೇಲೆ ಮಾತ್ರ ಎಐ ತಂತ್ರಜ್ಞಾನ ಅಳವಡಿಸಲಾಗಿದೆ ಎಂದು ತೋರಿಸಲಾಗಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಲಂಚದ ಆರೋಪವೂ ಕೇಳಿಬಂದಿದೆ: ಪ್ರಕರಣದಲ್ಲಿ ಮತ್ತೊಂದು ಸ್ಫೋಟಕ ಆರೋಪವೂ ಹೊರಬಿದ್ದಿದೆ. ಕ್ರೀಡಾಂಗಣದಲ್ಲಿ ಕೆಲಸ ಮಾಡಲು ಅನುಮತಿ ನೀಡುವ ಸಂಬಂಧ ಕೆಎಸ್‌ಸಿಎ ಐಟಿ ವಿಭಾಗದ ಮುಖ್ಯಸ್ಥರಾಗಿರುವ ರವಿ ಎಂಬುವರು ಆನ್‌ಲೈನ್ ಮೂಲಕ ಸುಮಾರು 40 ಸಾವಿರ ರೂಪಾಯಿ ಹಾಗೂ ನಗದು ರೂಪದಲ್ಲಿ 2 ಲಕ್ಷ ರೂಪಾಯಿಗೂ ಹೆಚ್ಚು ಹಣ ಪಡೆದಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಈ ಆರೋಪಗಳು ಇದೀಗ ಪ್ರಕರಣಕ್ಕೆ ಹೊಸ ತಿರುವು ನೀಡಿದ್ದು, ಹಣಕಾಸಿನ ಅಕ್ರಮ ಹಾಗೂ ಭ್ರಷ್ಟಾಚಾರದ ಅನುಮಾನಗಳನ್ನು ಮತ್ತಷ್ಟು ಹೆಚ್ಚಿಸಿವೆ.

ಒಬ್ಬರ ಮೇಲೆ ಮತ್ತೊಬ್ಬರು ಹೊಣೆ: ಬಾಕಿ ಹಣದ ವಿಚಾರ ಪ್ರಸ್ತಾಪವಾಗುತ್ತಿದ್ದಂತೆ ಕೆಎಸ್‌ಸಿಎ, ಸ್ಟಾಕು, ಟೆಕ್‌ಸ್ಟಿಚ್ ಹಾಗೂ ಇತರ ಸಂಬಂಧಿತ ಕಂಪನಿಗಳು ಪರಸ್ಪರ ಹೊಣೆಗಾ-ರಿಕೆಯನ್ನು ತಳ್ಳಿಹಾಕುತ್ತಿರುವುದಾಗಿ ಆರೋಪಿಸಲಾಗಿದೆ.

ಹಣ ಬಿಡುಗಡೆ ವಿಚಾರದಲ್ಲಿ ಯಾರು ಜವಾಬ್ದಾರರು ಎಂಬುದರ ಕುರಿತು ಸ್ಪಷ್ಟತೆ ಇಲ್ಲದ ಕಾರಣ ವಿವಾದ ಮತ್ತಷ್ಟು ಗಂಭೀರವಾಗಿದೆ. ಇದರಿಂದ ಕೆಲಸ ನಿರ್ವಹಿಸಿದ ಸಿಬ್ಬಂದಿ ಹಾಗೂ ಸಂಸ್ಥೆಗಳು ಸಂಕಷ್ಟಕ್ಕೆ ಸಿಲುಕಿವೆ.


ಪೊಲೀಸ್ ತನಿಖೆಯಲ್ಲಿ ಹಣಕಾಸಿನ ವಿವಾದ ಬಯಲು: ಪೊಲೀಸ್ ತನಿಖೆಯ ವೇಳೆ ಪ್ರಾಥಮಿಕವಾಗಿ ಇದು ಭದ್ರತಾ ಸಂಚಿಗಿಂತಲೂ ಹೆಚ್ಚು ಹಣಕಾಸಿನ ವ್ಯವಹಾರಕ್ಕೆ ಸಂಬಂಧಿಸಿದ ವಿವಾದ ಎನ್ನುವ ಅಂಶ ಬೆಳಕಿಗೆ ಬಂದಿದೆ ಎಂದು ಮೂಲಗಳು ತಿಳಿಸಿವೆ.

ಆರೋಪ ಎದುರಿಸುತ್ತಿದ್ದ ಇಬ್ಬರು ಯುವಕರಿಗೆ ಠಾಣೆಯಲ್ಲಿಯೇ ಜಾಮೀನು ನೀಡಲಾಗಿದೆ. ಆದರೆ ಸುಳ್ಳು ಆರೋಪದ ಕಾರಣದಿಂದಾಗಿ ಅವರು ಸಾರ್ವಜನಿಕವಾಗಿ ಮುಜುಗರ ಅನುಭವಿಸಬೇಕಾಯಿತು ಎಂದು ಕುಟುಂಬಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಐಪಿಎಲ್ ಪಂದ್ಯ ಸ್ಥಳಾಂತರಕ್ಕೂ ಇದೇ ಕಾರಣ?: ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊಂದು ಅಚ್ಚರಿಯ ಸಂಗತಿಯೂ ಹೊರಬಂದಿದೆ. ಭದ್ರತಾ ವ್ಯವಸ್ಥೆ ಕುರಿತ ಗೊಂದಲಗಳು, ಎಐ ಕ್ಯಾಮೆರಾ ವಿವಾದ ಹಾಗೂ ಸುಮಾರು 10 ಸಾವಿರ ಐಪಿಎಲ್ ಟಿಕೆಟ್‌ಗಳ ಬೇಡಿಕೆ ವಿಚಾರಗಳು ಸೇರಿ ಐಪಿಎಲ್ ಅಂತಿಮ ಹಂತದ ಕೆಲವು ಪಂದ್ಯಗಳನ್ನು ಗುಜರಾತ್‌ಗೆ ಸ್ಥಳಾಂತರಿಸುವ ನಿರ್ಧಾರಕ್ಕೆ ಕಾರಣವಾಗಿದ್ದವು ಎಂಬ ಮಾಹಿತಿ ಇದೀಗ ಚರ್ಚೆಗೆ ಗ್ರಾಸವಾಗಿದೆ.

ಸಿಸಿಟಿವಿ ವೈರ್ ಕಟ್ ಪ್ರಕರಣವೆಂದು ಆರಂಭವಾದ ವಿವಾದ ಈಗ ಬಹುಕೋಟಿ ರೂಪಾಯಿಗಳ ಟೆಂಡರ್, ಬಾಕಿ ಹಣ, ತಾಂತ್ರಿಕ ಲೋಪ, ಭ್ರಷ್ಟಾಚಾರದ ಆರೋಪ ಹಾಗೂ ಸುಳ್ಳು ಪ್ರಕರಣಗಳ ಸುತ್ತ ಸುತ್ತುತ್ತಿರುವುದು ಗಮನಾರ್ಹ. ಮುಂದಿನ ದಿನಗಳಲ್ಲಿ ತನಿಖೆ ಯಾವ ದಿಕ್ಕಿನಲ್ಲಿ ಸಾಗಲಿದೆ ಮತ್ತು ನಿಜಾಂಶ ಏನು ಎಂಬುದರ ಮೇಲೆ ಎಲ್ಲರ ಗಮನ ನೆಟ್ಟಿದೆ.

## ಐಪಿಎಲ್ ಬಗ್ಗೆ ಲಿವಿಂಗ್‌ಸ್ಟೋನ್ ಅಸಮಾಧಾನ!



ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್–19 ರಲ್ಲಿ ಸನ್‌ರೈಸರ್ಸ್ ಹೈದರಾ ಬಾದ್ ತಂಡದಲ್ಲಿ ಕಾಣಿಸಿಕೆ ಊಂಡಿದ್ದ ಇಂಗ್ಲೆಂಡ್ ಆಲ್‌ರೌಂಡರ್ ಲಿಯಾಮ್ ಲಿವಿಂಗ್ ಸ್ಟೋನ್ ಇದೀಗ ಐಪಿಎಲ್ ಬಗ್ಗೆ ತೀವ್ರ ಅಸ ಮಾಧಾನ ಹೊರ ಹಾಕಿದ್ದಾರೆ. 'ಸ್ಟಿಕ್ ಟು ಕ್ರಿಕೆಟ್' ಪಾಡ್‌ಕಾಸ್ಟ್‌ನಲ್ಲಿ ಮಾತ ನಾಡಿರುವ ಅವರು, ಐಪಿ-ಎಲ್ ಸಂಪೂರ್ಣ ವಾಗಿ ಬ್ಯಾಟರ್‌ಗಳ ಆಟವಾಗಿ ಬದ ಲಾಗಿದ್ದು, ಬೌಲರ್ ಗಳಿಗೆ ಯಾವುದೇ ಗೌರವ ಇಲ್ಲ ದಂತಾಗಿದೆ ಎಂದು ಮುಕ್ತವಾಗಿ ಹೇಳಿಕೆ ನೀಡಿದ್ದಾರೆ.

**ಬರೀ ಸಿಕ್ಸ್ ಸಿಕ್ಸ್:** ಪಂದ್ಯಾವಳಿಯಲ್ಲಿ ಕೇವಲ ರನ್‌ಗಳ ಮಳೆ ಹರಿಸುವುದನ್ನೇ ಗು-ರಿಯಾಗಿಸಿಕೊಂಡಿರುವುದರ ಬಗ್ಗೆ ಲಿವಿಂಗ್ ಸ್ಟೋನ್ ಬೇಸರ ವ್ಯಕ್ತಪಡಿಸಿದ್ದಾರೆ. "ಬ್ಯಾಟ-ರ್‌ಗಳು ಕೇವಲ 6, 6, 6 ಎಂದು ಸಿಕ್ಸರ್ ಗಳನ್ನು ಹೊಡೆಯುತ್ತಿರುವುದನ್ನು ನೋಡುವುದು ಈಗ ನಿಜಕ್ಕೂ ಬೋರಿಂಗ್ ಅನಿಸುತ್ತಿದೆ. ಇದರಲ್ಲಿ ಕ್ರಿಕೆಟ್‌ನ ನೈಜ ಮಜಾ ಸಿಗುತ್ತಿಲ್ಲ".

"ಪಿಚ್‌ಗಳು ಸಂಪೂರ್ಣವಾಗಿ ಬ್ಯಾಟಿಂಗ್‌ಗೆ ಪೂರಕವಾಗಿ , ಅಂದರೆ ಫ್ಲಾಟ್ ಆಗಿ ಇರುವುದರಿಂದ ಬ್ಯಾಟರ್‌ಗಳಿಗೆ ರನ್ ಗಳಿಸುವುದು ತುಂಬಾ ಸುಲಭವಾಗಿದೆ. ಬೌಲರ್‌ಗಳು ಎಷ್ಟೇ ಉತ್ತಮವಾಗಿ ಬೌಲಿಂಗ್ ಮಾಡಿದರೂ ರನ್ ನಿಯಂತ್ರಿಸಲು ಸಾಧ್ಯವಾಗುತ್ತಿಲ್ಲ. ಇದರಿಂದಾಗಿ ಪಂದ್ಯದಲ್ಲಿ ಕೌಶಲ್ಯಕ್ಕಿಂತ ಹೆಚ್ಚಾಗಿ ಕೇವಲ ಬಲಪ್ರಯೋಗಕ್ಕೆ ಮಾತ್ರ ಪ್ರಾಮುಖ್ಯತೆ ಸಿಗುತ್ತಿದೆ" ಎಂದು ಲಿಯಾಮ್ ಲಿವಿಂಗ್‌ಸ್ಟೋನ್ ಅಭಿಪ್ರಾಯಪಟ್ಟಿದ್ದಾರೆ.

**'ಇಂಪ್ಯಾಕ್ಟ್ ಪ್ಲೇಯರ್' ಅಸಮತೋಲನ:** ಐಪಿಎಲ್‌ನಲ್ಲಿ ಜಾರಿಯಲ್ಲಿರುವ 'ಇಂಪ್ಯಾಕ್ಟ್ ಪ್ಲೇಯರ್' ನಿಯಮವು ಬ್ಯಾಟರ್‌ಗಳಿಗೆ ಮತ್ತಷ್ಟು ಲಗಾಮಿಲ್ಲದ ಸ್ವಾತಂತ್ರ್ಯ ನೀಡಿದೆ ಎಂದು ಲಿಯಾಮ್ ಲಿವಿಂಗ್‌ಸ್ಟೋನ್ ಆರೋಪಿಸಿದ್ದಾರೆ. ಈ ನಿಯಮದಿಂದಾಗಿ ತಂಡದ ಬ್ಯಾಟಿಂಗ್ ಲೈನಪ್ ದೊಡ್ಡದಾಗುತ್ತದೆ. ಹೀಗಾಗಿ ವಿಕೆಟ್ ಉರುಳುವ ಭಯವಿಲ್ಲದೆ ಬ್ಯಾಟ-ರ್‌ಗಳು ಮೊದಲ ಎಸೆತದಿಂದಲೇ ಮನಬಂದಂತೆ ಬ್ಯಾಟ್ ಬೀಸುತ್ತಿದ್ದಾರೆ. ಇದು ಕ್ರಿಕೆಟ್‌ನ ಮೂಲ ಆಟದ ಸಮತೋಲನವನ್ನು ಕೆಡಿಸಿದೆ ಎಂದು ಲಿವಿಂಗ್‌ಸ್ಟೋನ್ ಅಭಿಪ್ರಾಯಪಟ್ಟಿದ್ದಾರೆ.

**ಒಂದೇ ಪಿಚ್‌ನ ಮರುಬಳಕೆ:** ಸನ್‌ರೈಸರ್ಸ್ ಹೈದರಾಬಾದ್ ತಂಡವು ಒಂದೇ ಪಿಚ್‌ನಲ್ಲಿ ಸತತವಾಗಿ 5 ರಿಂದ 6 ಪಂದ್ಯಗಳನ್ನು ಆಡಬೇಕಾಗಿ ಬಂದಿದ್ದನ್ನು ಅವರು ಇದೇ ವೇಳೆ ನೆನಪಿಸಿಕೊಂಡಿದ್ದಾರೆ. ಪಿಚ್‌ಗಳನ್ನು ಪದೇ ಪದೇ ಮರುಬಳಕೆ ಮಾಡುವುದರಿಂದ ಅವು ಸಂಪೂರ್ಣವಾಗಿ ಜೀವಹೀನವಾಗಿ, ಕೇವಲ ಬ್ಯಾಟಿಂಗ್ ಸ್ನೇಹಿಯಾಗಿ ಬದಲಾಗುತ್ತಿವೆ. ಅಂ-ದರೆ ಇಲ್ಲಿ ಗುಣಮಟ್ಟಕ್ಕೆ ಯಾವುದೇ ಬೆಲೆ ಇಲ್ಲ ಎಂದು ಲಿಯಾಮ್ ಲಿವಿಂಗ್‌ಸ್ಟೋನ್ ಲೀಗ್‌ನ ನಿರ್ವಹಣೆಯನ್ನು ಪ್ರಶ್ನಿಸಿದ್ದಾರೆ.

**ವಾಂಖೆಡೆ ಪಂದ್ಯದ ಉದಾಹರಣೆ:** ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಪಂದ್ಯವೊಂದನ್ನು ಉದಾಹರಿಸಿದ ಅವರು, ಎದುರಾಳಿ ತಂಡ ನೀಡಿದ್ದ 230ಕ್ಕೂ ಅಧಿಕ ರನ್‌ಗಳ ಬೃಹತ್ ಗುರಿಯನ್ನು ತಮ್ಮ ತಂಡ ಕೇವಲ 18 ಓವರ್‌ಗಳಲ್ಲೇ ಬೆನ್ನಟ್ಟಿದ್ದನ್ನು ನೆನಪಿಸಿಕೊಂಡರು. ಟಿ20 ಕ್ರಿಕೆಟ್‌ನಲ್ಲಿ 230 ರನ್‌ಗಳು ಕೂಡ ಸುರಕ್ಷಿತವಲ್ಲ ಎಂದರೆ ಬೌಲರ್‌ಗಳ ಪರಿಸ್ಥಿತಿ ಏನಾಗಬೇಡ ಎಂದು ಲಿಯಾಮ್ ಲಿವಿಂಗ್‌ಸ್ಟೋನ್ ಆತಂಕ ವ್ಯಕ್ತ ಪಡಿಸಿದ್ದಾರೆ.

ಲಿಯಾಮ್ ಲಿವಿಂಗ್‌ಸ್ಟೋನ್ ಅವರ ಈ ಕಟು ವಿಮರ್ಶೆಯು ಜಾಗತಿಕ ಕ್ರಿಕೆಟ್ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಕ್ರಿಕೆಟ್ ಕೇವಲ ಬ್ಯಾಟರ್‌ಗಳ ರನ್ ಗಳಿಸುವ ಯಂತ್ರವಾಗಿ ಬದಲಾಗಬಾರದು ಮತ್ತು ಬೌಲರ್‌ಗಳಿಗೂ ಸಮಾನ ಅವಕಾಶ ಸಿಗಬೇಕು ಎಂಬ ಅಭಿಪ್ರಾಯ ಎಲ್ಲೆಡೆ ಕೇಳಿ ಬರಲಾರಂಭಿಸಿದೆ. ಹೀಗಾಗಿ ಮುಂದಿನ ಸೀಸನ್ ನಲ್ಲಾದರೂ ಬಿಸಿಸಿಐ ಸಮತೋಲಿತ ಪಿಚ್ ನಿರ್ಮಿಸಲಿದ್ದಾರಾ ಕಾದು ನೋಡಬೇಕಿದೆ.

## ಟೀಂ ಇಂಡಿಯಾಗೆ ಆಯ್ಕೆಯಾದ ವೈಭವ್ ಸೂರ್ಯವಂಶಿಗೆ ಸ್ಪೆಷಲ್ ರಿಯಾಯ್ತಿ ಕೊಟ್ಟ ಬಿಸಿಸಿಐ

**ಮುಂಬೈ:** ಭಾರತೀಯ ಕ್ರಿಕೆಟ್‌ನ ಭವಿಷ್ಯದ ಸೂಪರ್‌ಸ್ಟಾರ್ ಎಂದು ಈಗಾಗಲೇ ಗುರುತಿಸಿಕೊಂಡಿರುವ ಯುವ ಪ್ರತಿಭೆ ವೈಭವ್ ಸೂರ್ಯವಂಶಿ ಅವರ ಕನಸು ಇದೀಗ ನನಸಾಗಿದೆ. ಕಳೆದ ಒಂದು ವರ್ಷದಿಂದಲೇ ಅವರನ್ನು ಟೀಂ ಇಂಡಿಯಾಗೆ ಆಯ್ಕೆ ಮಾಡಬೇಕು ಎಂಬ ಆಗ್ರಹ ಕ್ರಿಕೆಟ್ ಅಭಿಮಾನಿಗಳು, ಮಾಜಿ ಆಟಗಾರರು ಹಾಗೂ ವಿಶ್ಲೇಷಕರಿಂದ ಕೇಳಿಬರುತ್ತಿತ್ತು. ಐಪಿಎಲ್‌ನಲ್ಲಿ ತೋರಿದ ಅಸಾಧಾರಣ ಪ್ರದರ್ಶನ ಮತ್ತು ದೇಶೀಯ ಕ್ರಿಕೆಟ್‌ನಲ್ಲಿ ದಾಖಲಿಸಿದ ಸಾಧನೆಗಳ ಫಲವಾಗಿ ಇದೀಗ ವೈಭವ್ ಭಾರತ ಟಿ20 ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

ಇಂಗ್ಲೆಂಡ್ ಮತ್ತು ಐರ್ಲೆಂಡ್ ವಿರುದ್ಧ ನಡೆಯಲಿರುವ ಟಿ20 ಸರಣಿಗಾಗಿ ಭಾರತ ತಂಡ ಪ್ರಕಟಗೊಂಡಿದ್ದು, ಅದರಲ್ಲಿ ವೈಭವ್ ಸೂರ್ಯವಂಶಿ ಹೆಸರು ಸೇರ್ಪಡೆಯಾಗಿರುವುದು ದೇಶದಾದ್ಯಂತ ಕ್ರಿಕೆಟ್ ಅಭಿಮಾನಿಗಳಲ್ಲಿ ಸಂತಸ ಮೂಡಿಸಿದೆ. ಕೇವಲ 15ನೇ ವಯಸ್ಸಿನಲ್ಲೇ ರಾಷ್ಟ್ರೀಯ ತಂಡದ ಜೆರ್ಸಿ ಧರಿಸುವ ಅವಕಾಶ ಪಡೆದಿರುವ ಅವರು ಭಾರತೀಯ ಕ್ರಿಕೆಟ್ ಇತಿಹಾಸದಲ್ಲೇ ಅತ್ಯಂತ ಕಿರಿಯ ಆಟಗಾರರಲ್ಲಿ ಒಬ್ಬರಾಗಿದ್ದಾರೆ.

**ವೈಭವ್‌ಗೆ ಬಿಸಿಸಿಐನ ವಿಶೇಷ ಸೌಲಭ್ಯ:** ಟೀಂ ಇಂಡಿಯಾ ಆಯ್ಕೆಗೊಂಡಿರುವುದರ ಜೊತೆಗೆ ವೈಭವ್ ಸೂರ್ಯವಂಶಿಗೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ವಿಶೇಷ ರಿಯಾಯ್ತಿಯನ್ನೂ ನೀಡಿದೆ. ಸಾಮಾನ್ಯವಾಗಿ ರಾಷ್ಟ್ರೀಯ ತಂಡದ ಆಟಗಾರರು ವಿದೇಶಿ ಪ್ರವಾಸಗಳ ಸಂದರ್ಭದಲ್ಲಿ ತಮ್ಮ ಕುಟುಂಬ ಸದಸ್ಯರು ಅಥವಾ ಪೋಷಕರೊಂದಿಗೆ ಪ್ರಯಾಣಿಸುವುದಿಲ್ಲ. ಹಿರಿಯ ಆಟಗಾರರು ತಂಡದೊಂದಿಗೆ ಪ್ರತ್ಯೇಕವಾಗಿ ಪ್ರವಾಸ ಕೈಗೊಳ್ಳುವುದು ಹಲವು ವರ್ಷಗಳಿಂದ ಅನುಸರಿಸಲಾಗುತ್ತಿರುವ ಪದ್ಧತಿಯಾಗಿದೆ.

ಆದರೆ ವೈಭವ್ ಇನ್ನೂ ಅಪ್ರಾಪ್ತ ವಯಸ್ಸಿನ ಆಟಗಾರನಾಗಿರುವುದರಿಂದ ಹಾಗೂ ಮೊದಲ ಬಾರಿಗೆ ಹಿರಿಯರ ರಾಷ್ಟ್ರೀಯ ತಂಡದೊಂದಿಗೆ ವಿದೇಶ ಪ್ರವಾಸ ಕೈಗೊಳ್ಳುತ್ತಿರುವ ಹಿನ್ನೆಲೆ ಬಿಸಿಸಿಐ ವಿಶೇಷ ನಿರ್ಧಾರ ಕೈಗೊಂಡಿದೆ. ಅವರ ಪೋಷಕರು ಅಥವಾ ಕುಟುಂಬದ ಸದಸ್ಯರು ಪ್ರವಾಸದ ವೇಳೆ ಜೊತೆಯಾಗಿ ಇರಲು ಅವಕಾಶ ನೀಡಲಾಗಿದೆ.

**ಹಿರಿಯರ ತಂಡದ ವಾತಾವರಣ ವಿಭಿನ್ನ:** ಇದುವರೆಗೆ ವೈಭವ್ ಅಂಡರ್–19, ಜೂನಿಯರ್ ಹಾಗೂ ಭಾರತ 'ಎ' ತಂಡಗಳೊಂದಿಗೆ ವಿದೇಶ ಪ್ರವಾಸ ಕೈಗೊಂಡಿದ್ದರು. ಆದರೆ ಹಿರಿಯರ ರಾಷ್ಟ್ರೀಯ ತಂಡದ ವಾತಾವರಣ ಸಂಪೂರ್ಣವಾಗಿ ಭಿನ್ನವಾಗಿರುತ್ತದೆ. ಮಾಧ್ಯಮಗಳ ಒತ್ತಡ, ಅಭಿಮಾನಿಗಳ ನಿರೀಕ್ಷೆ, ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆ ಹಾಗೂ ನಿರಂತರ ಪ್ರಯಾಣಗಳು ಯುವ ಆಟಗಾರರ ಮೇಲೆ ಮಾನಸಿಕ ಒತ್ತಡವನ್ನು ಉಂಟುಮಾಡಬಹುದು.

ಈ ಹಿನ್ನೆಲೆಯಲ್ಲಿ ವೈಭವ್‌ಗೆ ಕುಟುಂಬದ ಬೆಂಬಲ ಅಗತ್ಯ ಎಂದು ಬಿಸಿಸಿಐ ಅಭಿಪ್ರಾಯಪಟ್ಟಿದೆ. ತಮ್ಮ ಜೀವನದ ಅತ್ಯಂತ ಮಹತ್ವದ ಹಂತದಲ್ಲಿ ಪೋಷಕರ ಉಪಸ್ಥಿತಿ ಅವರಿಗೆ ಆತ್ಮವಿಶ್ವಾಸ ಹಾಗೂ ಭಾವನಾತ್ಮಕ ಶಕ್ತಿಯನ್ನು ನೀಡಲಿದೆ ಎಂಬ ನಂಬಿಕೆಯಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ.

**ಬಿಸಿಸಿಐ ಕಾರ್ಯದರ್ಶಿ ಸ್ಪಷ್ಟನೆ:** ಈ ಕುರಿತು ಪ್ರತಿಕ್ರಿಯಿಸಿರುವ ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ, ವೈಭವ್ ಇನ್ನೂ ಬಾಲ್ಯ ವಯಸ್ಸಿನಲ್ಲಿದ್ದು, ಹಿರಿಯರ ತಂಡದ ವಾತಾವರಣಕ್ಕೆ ಹೊಂದಿಕೊಳ್ಳುವ ಸಂದರ್ಭದಲ್ಲಿ ಕುಟುಂಬದ ಬೆಂಬಲ ಅಗತ್ಯವಾಗಬಹುದು ಎಂದು ಹೇಳಿದ್ದಾರೆ.

"ವೈಭವ್ ಅಪ್ರಾಪ್ತ ವಯಸ್ಸಿನ ಆಟಗಾರ. ರಾಷ್ಟ್ರೀಯ ತಂಡದ ಒತ್ತಡ, ಅಂತಾರಾಷ್ಟ್ರೀಯ ಕ್ರಿಕೆಟ್‌ನ ವಾತಾವರಣ ಹಾಗೂ ಹೊಸ ಪರಿಸ್ಥಿತಿಗಳನ್ನು ಎದುರಿಸುವ ಸಂದರ್ಭದಲ್ಲಿ ಕುಟುಂಬದ ಸದಸ್ಯರ ಉಪಸ್ಥಿತಿ ಅವನಿಗೆ ಸಹಕಾರಿಯಾಗಲಿದೆ. ಆದ್ದರಿಂದ ಪೋಷಕರು ಅಥ-'ವಾ ಕುಟುಂಬದ ಸದಸ್ಯರು ಜೊತೆಯಾಗಿ ಇರಲು ಅನುಮತಿ ನೀಡಲಾಗಿದೆ. ಆದರೆ ಇದು ಕೇವಲ ವೈಭವ್‌ಗಾಗಿ ಮಾತ್ರ ನೀಡಲಾಗಿರುವ ವಿಶೇಷ ಅವಕಾಶ. ಇತರ ಆಟಗಾರರಿಗೆ ಈ ನಿಯಮ ಅನ್ವಯಿಸುವುದಿಲ್ಲ," ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಪ್ರಸ್ತುತ ವೈಭವ್ ಸೂರ್ಯವಂಶಿ ಶ್ರೀಲಂಕಾದಲ್ಲಿ ನಡೆಯುತ್ತಿರುವ ತ್ರಿಕೋನ ಸರಣಿಯಲ್ಲಿ ಭಾರತ 'ಎ' ತಂಡವನ್ನು ಪ್ರತಿನಿಧಿಸುತ್ತಿದ್ದಾರೆ. ಅಲ್ಲಿ ಕೂಡ ಅವರು ಉತ್ತಮ ಪ್ರದರ್ಶನ ನೀಡುತ್ತಿದ್ದು, ಆಯ್ಕೆ ಸಮಿತಿಯ ಗಮನ ಸೆಳೆದಿದ್ದಾರೆ.

ವೈಭವ್ ಅವರ ತಂದೆ ಶೀಘ್ರದಲ್ಲೇ ಶ್ರೀಲಂಕಾಕ್ಕೆ ತೆರಳಲಿದ್ದು, ಮಗನ ಆಟವನ್ನು ನೇರವಾಗಿ ವೀಕ್ಷಿಸಲಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ನಂ ತರ ಇಂಗ್ಲೆಂಡ್ ಹಾಗೂ ಐಲೆಂರ್ಡ್ ಪ್ರವಾಸದ ವೇಳೆಯೂ ಕುಟುಂಬ ಸದಸ್ಯರು ಜೊತೆಗಿರಲು ಬಯಸಿದರೆ, ಅಗತ್ಯ ವ್ಯವಸ್ಥೆಗಳನ್ನು ಬಿಸಿಸಿಐ ಮಾಡಿಕೊಡಲಿದೆ ಎಂದು ತಿಳಿದುಬಂದಿದೆ.

ಐಪಿಎಲ್ 2026ರಲ್ಲಿ ಐತಿಹಾಸಿಕ ಸಾಧನೆ: ವೈಭವ್ ಸೂರ್ಯವಂಶಿಯ ಹೆಸರು ದೇಶದಾದ್ಯಂತ ಮನೆಮಾತಾಗಲು ಪ್ರಮುಖ ಕಾರಣ ಐಪಿಎಲ್ 2026ರಲ್ಲಿನ ಅವರ ಅದ್ಭುತ ಪ್ರದರ್ಶನ. ಅನುಭವಿಗಳಿಂದ ತುಂಬಿದ್ದ ಟೂರ್ನಿಯಲ್ಲಿ ಕಿರಿಯ ಆಟಗಾರನಾಗಿದ್ದರೂ ಅವರು ಅಚ್ಚರಿಯ ಬ್ಯಾಟಿಂಗ್ ಪ್ರದರ್ಶನ ನೀಡಿ ಎಲ್ಲರ ಗಮನ ಸೆಳೆದಿದ್ದರು.

ಐಪಿಎಲ್ 2026ರಲ್ಲಿ ವೈಭವ್ ಒಟ್ಟು 776 ರನ್‌ಗಳನ್ನು ಸಿಡಿಸಿ ಟೂರ್ನಿಯ ಅತಿ ಹೆಚ್ಚು ರನ್ ಗಳಿಸಿದ ಬ್ಯಾಟರ್ ಆಗಿ ಹೊರಹೊಮ್ಮಿದರು. ಇದರೊಂದಿಗೆ ಅವರು ಪ್ರತಿಷ್ಠಿತ ಆರೆಂಜ್ ಕ್ಯಾಪ್ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡರು. ಅಷ್ಟೇ ಅಲ್ಲದೆ ಟೂರ್ನಿಯ ಅತ್ಯುತ್ತಮ ಆಟಗಾರನಿಗೆ ನೀಡಲಾಗುವ ಮೋಸ್ಟ್ ವ್ಯಾಲ್ಯೂಯಬಲ್ ಪ್ಲೇಯರ್ (ಒಗಿಕ) ಪ್ರಶಸ್ತಿಯನ್ನೂ ಗೆದ್ದರು.

ಕೇವಲ 15 ವರ್ಷದ ಬಾಲಕನೊಬ್ಬ ವಿಶ್ವದ ಅತಿದೊಡ್ಡ ಟಿ20 ಲೀಗ್‌ನಲ್ಲಿ ಇಂತಹ ಸಾಧನೆ ಮಾಡಿರುವುದು ಕ್ರಿಕೆಟ್ ತಜ್ಞರನ್ನೇ ಅಚ್ಚ-ರಿಗೊಳಿಸಿತ್ತು. ಅವರ ನಿರ್ಭೀತ ಬ್ಯಾಟಿಂಗ್, ವೇಗದ ರನ್‌ಗಳ ಗಳಿಕೆ ಹಾಗೂ ಒತ್ತಡದ ಸಂದರ್ಭದಲ್ಲೂ ತೋರಿದ ಪರಿಪಕ್ವತೆ ಎಲ್ಲರಿಂದ ಪ್ರಶಂಸೆಗೆ ಪಾತ್ರವಾಗಿತ್ತು.

ಟೀಂ ಇಂಡಿಯಾದ ಕಿರಿಯ ಆಟಗಾರರಲ್ಲಿ ಒಬ್ಬ: ಭಾರತದ ಟಿ20 ತಂಡದಲ್ಲಿ ಸ್ಥಾನ ಪಡೆದಿರುವ ವೈಭವ್ ಸೂರ್ಯವಂಶಿ ಇದೀಗ ದೇಶದ ಪರ ಆಡಿದ ಅತ್ಯಂತ ಕಿರಿಯ ಆಟಗಾರರಲ್ಲಿ ಒಬ್ಬರಾಗಿದ್ದಾರೆ. ಅವರ ಆಯ್ಕೆ ಯುವ ಪ್ರತಿಭೆಗಳಿಗೆ ದೊಡ್ಡ ಪ್ರೇರಣೆಯಾಗಿದ್ದು, ವಯಸ್ಸಿಗಿಂತ ಪ್ರತಿಭೆ ಮತ್ತು ಪ್ರದರ್ಶನಕ್ಕೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

ಅವರ ಸಾಧನೆಗೆ ಮಾಜಿ ಕ್ರಿಕೆಟಿಗರು, ಕೋಚ್‌ಗಳು ಹಾಗೂ ಅಭಿಮಾನಿಗಳು ಅಭಿನಂದನೆಗಳ ಮಹಾಪೂರವನ್ನೇ ಹರಿಸಿದಾತ್ತರೆ. ಸಾಮಾಜಿಕ ಜಾಲತಾಣಗಳಲ್ಲಿಯೂ ವೈಭವ್ ಹೆಸರು ಟ್ರೆಂಡ್ ಆಗುತ್ತಿದ್ದು, ಅವರ ಭವಿಷ್ಯದ ಬಗ್ಗೆ ಭಾರೀ ನಿರೀಕ್ಷೆಗಳು ಮೂಡಿವೆ.

ಈಗ ಆರಂಭವಾಗಲಿದೆ ನಿಜವಾದ ಸವಾಲು: ಐಪಿಎಲ್ ಹಾಗೂ ದೇಶೀಯ ಕ್ರಿಕೆಟ್‌ನಲ್ಲಿ ಮಿಂಚಿರುವ ವೈಭವ್‌ಗೆ ಈಗ ಅಂತಾರಾಷ್ಟ್ರೀಯ ಕ್ರಿಕೆಟ್‌ನ ನಿಜವಾದ ಸವಾಲು ಎದುರಾಗಲಿದೆ. ವಿಶ್ವದ ಅತ್ಯುತ್ತಮ ಬೌಲರ್‌ಗಳ ವಿರುದ್ಧ ಆಡಬೇಕಾಗಿರುವುದು, ವಿವಿಧ ವಾತಾವರಣಗಳಿಗೆ ಹೊಂದಿಕೊಳ್ಳಬೇಕಾಗಿರುವುದು ಹಾಗೂ ದೇಶದ ನಿರೀಕ್ಷೆಗಳನ್ನು ನಿಭಾಯಿ ಸಬೇಕಾಗಿರುವುದು ಅವರ ಮುಂದಿನ ಪರೀಕ್ಷೆಯಾಗಲಿದೆ.

ಆದರೆ ಈಗಾಗಲೇ ತೋರಿರುವ ಆತ್ಮವಿಶ್ವಾಸ, ಪ್ರತಿಭೆ ಹಾಗೂ ಶ್ರಮದ ಮನೋಭಾವವನ್ನು ಗಮನಿಸಿದರೆ ವೈಭವ್ ಭಾರತೀಯ ಕ್ರಿಕೆಟ್‌ನ ಮುಂದಿನ ತಲೆಮಾರಿನ ಪ್ರಮುಖ ಆಟಗಾರನಾಗಿ ಹೊರಹೊಮ್ಮುವ ಎಲ್ಲ ಸಾಧ್ಯತೆಗಳೂ ಕಂಡುಬರುತ್ತಿವೆ.

ಬಿಸಿಸಿಐ ನೀಡಿರುವ ವಿಶೇಷ ರಿಯಾಯ್ತಿ ಕೇವಲ ಸೌಲಭ್ಯವಲ್ಲ, ಯುವ ಪ್ರತಿಭೆಯ ಬೆಳವಣಿಗೆಗೆ ನೀಡುತ್ತಿರುವ ಬೆಂಬಲದ ಸಂಕೇತವಾಗಿದೆ. ವೈಭವ್ ಸೂರ್ಯವಂಶಿ ತಮ್ಮ ಮೊದಲ ಅಂತಾರಾಷ್ಟ್ರೀಯ ಪ್ರವಾಸದಲ್ಲಿ ಹೇಗೆ ಮಿಂಚುತ್ತಾರೆ ಎಂಬುದನ್ನು ಕಾತರದಿಂದ ಕಾದು ನೋಡುವ ಸಮಯ ಈಗ ಆರಂಭವಾಗಿದೆ.




## ಜನನಾಯಗನ್ ವಿರುದ್ಧ ಕನ್ನಡಪರ ಹೋರಾಟ; ವಿಜಯ್ ಚಿತ್ರಕ್ಕೆ ಹೊಸ ಸಂಕಷ್ಟ

**ಬೆಂಗಳೂರು:** ತಮಿಳು ಚಿತ್ರರಂಗದ ಸ್ಟಾರ್ ನಟ ಹಾಗೂ ತಮಿಳುನಾಡು ಮುಖ್ಯಮಂತ್ರಿ ವಿಜಯ್ ದಳಪತಿ ಅಭಿನಯದ ಬಹು ನಿರೀಕ್ಷಿತ 'ಜನನಾಯಗನ್' ಸಿನಿಮಾ ಬಿಡುಗಡೆಯ ಹಂತ ತಲುಪಿರುವಾಗಲೇ ಮತ್ತೊಂದು ದೊಡ್ಡ ವಿವಾದ ಎದುರಾಗಿದೆ. ಈಗಾಗಲೇ ಹಲವು ಅಡೆತಡೆಗಳು, ಸೆನ್ಸಾರ್ ಸಮಸ್ಯೆಗಳು ಹಾಗೂ ರಾಜಕೀಯ ಬೆಳವಣಿಗೆಗಳ ನಡುವೆ ಸಿಲುಕಿದ್ದ ಈ ಚಿತ್ರಕ್ಕೆ ಇದೀಗ ಕರ್ನಾಟಕದಲ್ಲಿ ಬಿಡುಗಡೆ ಸಂಬಂಧ ಹೊಸ ಸಂಕಷ್ಟ ಎದುರಾಗಿರುವುದು ಚಿತ್ರತಂಡಕ್ಕೆ ತಲೆನೋವಾಗಿ ಪರಿಣಮಿಸಿದೆ.

ವಿಜಯ್ ಅವರ ರಾಜಕೀಯ ಪ್ರವೇಶದ ಬಳಿಕ ಬಿಡುಗಡೆಯಾಗುತ್ತಿರುವ ಮಹತ್ವದ ಚಿತ್ರಗಳಲ್ಲಿ 'ಜನನಾಯಗನ್' ಕೂಡ ಒಂದಾಗಿದೆ. ಈ ಸಿನಿಮಾ ಕೇವಲ ಸಿನಿಪ್ರೇಮಿಗಳಲ್ಲಷ್ಟೇ ಅಲ್ಲ, ರಾಜಕೀಯ ವಲಯದಲ್ಲೂ ಸಾಕಷ್ಟು ಕುತೂಹಲ ಮೂಡಿಸಿದೆ. ಆದರೆ ಸಿನಿಮಾ ಬಿಡುಗಡೆ ಸಮೀಪಿಸುತ್ತಿದ್ದಂತೆ ಕರ್ನಾಟಕದಲ್ಲಿ ವಿರೋಧದ ಸ್ವರಗಳು ಕೇಳಿಬರುತ್ತಿದ್ದು, ಚಿತ್ರದ ಭವಿಷ್ಯದ ಕುರಿತು ಅನಿಶ್ಚಿತತೆ ಮೂಡಿದೆ.

**ಕರ್ನಾಟಕದಲ್ಲಿ 'ಜನನಾಯಗನ್' ಬಿಡುಗಡೆಗೆ ವಿರೋಧ:** ಕನ್ನಡಪರ ಹೋರಾಟಗಾರ ಹಾಗೂ ಹಿರಿಯ ನಾಯಕ ವಾಟಾಳ್ ನಾಗರಾಜ್ ಅವರು 'ಜನನಾಯಗನ್' ಸಿನಿಮಾದ ಬಿಡುಗಡೆಗೆ ವಿರೋಧ ವ್ಯಕ್ತಪಡಿಸಿದ್ದಾರೆ. ವಿಜಯ್ ಅವರು ತಮಿಳುನಾಡಿನ ಮುಖ್ಯಮಂತ್ರಿಯಾಗಿ ಮೇಕೆದಾಟು ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿ ಅವರ ಸಿನಿಮಾ ಬಿಡುಗಡೆಗೆ ಅವಕಾಶ ನೀಡಬಾರದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ವಾಟಾಳ್ ನಾಗರಾಜ್ ಮಾತನಾಡುತ್ತಾ, "ಕನ್ನಡಿಗರು ಯಾವುದೇ ವಿಚಾರವನ್ನು ಸಹಿಸಿಕೊಳ್ಳಬಹುದು. ಆದರೆ ರಾಜ್ಯದ ನೆಲ, ಜಲ ಮತ್ತು ಭಾಷೆಯ ವಿಚಾರ ಬಂದಾಗ ಯಾವುದೇ ರಾಜಿ ಮಾಡುವುದಿಲ್ಲ. ಮೇಕೆದಾಟು ಯೋಜನೆಗೆ ವಿರೋಧ ವ್ಯಕ್ತಪಡಿಸುವವರು ಕರ್ನಾಟಕದ ಜನರ ಭಾವನೆಗಳನ್ನು ಗೌರವಿಸುತ್ತಿಲ್ಲ. ಅಂತಹ ಪರಿಸ್ಥಿತಿಯಲ್ಲಿ ಅವರ ಸಿನಿಮಾಗಳನ್ನು ಇಲ್ಲಿ ಬಿಡುಗಡೆ ಮಾಡಲು ಅವಕಾಶ ನೀಡುವುದಿಲ್ಲ" ಎಂದು ಎಚ್ಚರಿಕೆ ನೀಡಿದ್ದಾರೆ.

**ಮೇಕೆದಾಟು ವಿವಾದದ ಪರಿಣಾಮ?:** ಕಾವೇರಿ ನೀರಿನ ಹಂಚಿಕೆ ಹಾಗೂ ಮೇಕೆದಾಟು ಯೋಜನೆ ವಿಚಾರವು ಹಲವು ವರ್ಷಗಳಿಂದ ಕರ್ನಾಟಕ ಮತ್ತು ತಮಿಳುನಾಡಿನ ನಡುವಿನ ಸೂಕ್ಷ್ಮ ವಿಷಯವಾಗಿದೆ. ವಿಜಯ್ ಮುಖ್ಯಮಂತ್ರಿಯಾದ ಬಳಿಕ ಮೇಕೆದಾಟು ಯೋಜನೆ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಮರುಪರಿಶೀಲನಾ ಅರ್ಜಿ ಸಲ್ಲಿಸಿರುವುದಾಗಿ ವರದಿಯಾಗಿದೆ.

ಅಲ್ಲದೆ ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದ ಸಂದರ್ಭದಲ್ಲೂ ಮೇಕೆದಾಟು ಯೋಜನೆ ಕುರಿತು ತಮ್ಮ ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದ್ದಾರೆ ಎನ್ನಲಾಗುತ್ತಿದೆ. ಈ ಬೆಳವಣಿಗೆಗಳು ಕರ್ನಾಟಕದ ಕನ್ನಡಪರ ಸಂಘಟನೆಗಳ ಆಕ್ರೋಶಕ್ಕೆ ಕಾರಣವಾಗಿವೆ.

**ಸಂಕಷ್ಟಗಳ ಸರಣಿಯಲ್ಲಿ 'ಜನನಾಯಗನ್':** 'ಜನನಾಯಗನ್' ಸಿನಿಮಾ ಆರಂಭದಿಂದಲೂ ಹಲವು ಸವಾಲುಗಳನ್ನು ಎದುರಿಸಿದೆ. ಭಾರೀ ಬಜೆಟ್‌ನಲ್ಲಿ ನಿರ್ಮಾಣವಾಗಿರುವ ಈ ಚಿತ್ರ ಜನವರಿಯಲ್ಲೇ ಬಿಡುಗಡೆಯಾಗಬೇಕಿತ್ತು. ಆದರೆ ಸೆನ್ಸಾರ್ ಪ್ರಕ್ರಿಯೆ ಸೇರಿದಂತೆ ಹಲವು ತಾಂತ್ರಿಕ ಹಾಗೂ ಆಡಳಿತಾತ್ಮಕ ಕಾರಣಗಳಿಂದ ಬಿಡುಗಡೆ ಮುಂದೂಡಲ್ಪಟ್ಟಿತು.

ಚಿತ್ರತಂಡ ಹಲವು ಬಾರಿ ಬಿಡುಗಡೆಯ ದಿನಾಂಕ ನಿಗದಿಪಡಿಸಲು ಪ್ರಯತ್ನಿಸಿದರೂ ಅದು ಸಾಧ್ಯವಾಗಲಿಲ್ಲ. ಈ ನಡುವೆ ತಮಿಳುನಾಡಿನಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಾಗಿದ್ದರಿಂದ ಸಿನಿಮಾದ ಪ್ರಚಾರ ಹಾಗೂ ಬಿಡುಗಡೆ ಯೋಜನೆಗಳ ಮೇಲೂ ಪರಿಣಾಮ ಬೀರಿತು.

ಈ ಎಲ್ಲಾ ಅಡೆತಡೆಗಳನ್ನು ದಾಟಿ ಚಿತ್ರ ಬಿಡುಗಡೆಯ ಹಂತ ತಲುಪಿದ ಸಂದರ್ಭದಲ್ಲಿ ಇದೀಗ ಕರ್ನಾಟಕದಲ್ಲಿ ವಿರೋಧ ಎದುರಾಗಿರುವುದು ಚಿತ್ರತಂಡದ ಆತಂಕವನ್ನು ಹೆಚ್ಚಿಸಿದೆ.

**ಕೆವಿಎನ್ ನಿರ್ಮಾಣ ಸಂಸ್ಥೆಗೆ ನಷ್ಟದ ಭೀತಿ:** ಈ ಚಿತ್ರವನ್ನು ಕನ್ನಡದ ಪ್ರಮುಖ ನಿರ್ಮಾಣ ಸಂಸ್ಥೆ ಕೆವಿಎನ್ ಪ್ರೊಡಕ್ಷನ್ಸ್ ನಿರ್ಮಿಸಿದೆ. ಬಹುಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ವಾಗಿರುವ ಈ ಸಿನಿಮಾ ದಕ್ಷಿಣ ಭಾರತದಲ್ಲೇ ದೊಡ್ಡ ಮಟ್ಟದ ಬಿಡುಗಡೆಗೆ ಸಿದ್ಧ ವಾಗಿತ್ತು.

ಒಂದು ವೇಳೆ ಕರ್ನಾಟಕದಲ್ಲಿ ಸಿನಿಮಾ ಬಿಡುಗಡೆ ಆಗದಿದ್ದರೆ ನಿರ್ಮಾಪಕರಿಗೆ ಭಾರೀ ಆರ್ಥಿಕ ನಷ್ಟ ಉಂಟಾಗುವ ಸಾಧ್ಯತೆ ಇದೆ. ಕರ್ನಾಟಕ ಮಾರುಕಟ್ಟೆ ದಕ್ಷಿಣ ಭಾರತದ ಪ್ರಮುಖ ಸಿನಿಮಾ ವಲಯಗಳಲ್ಲಿ ಒಂದಾಗಿದ್ದು, ದೊಡ್ಡ ಮಟ್ಟದ ಆದಾಯದ ನಿರೀಕ್ಷೆಯೂ ಇದೆ.

**ವಿತರಕರಿಗೂ ಆತಂಕ:** ಚಿತ್ರದ ಬಿಡುಗಡೆಗಾಗಿ ಈಗಾಗಲೇ ಹಲವು ವಿತರಕರು ಮತ್ತು ಪ್ರದರ್ಶಕರು ದೊಡ್ಡ ಮೊತ್ತದ ಹಣ ಹೂಡಿಕೆ ಮಾಡಿದ್ದಾರೆ. ತಿಂಗಳುಗಟ್ಟಲೆ ಸಿನಿಮಾ ಬಿಡುಗಡೆಯ ನಿರೀಕ್ಷೆಯಲ್ಲಿದ್ದ ಅವರು, ಚಿತ್ರ ಬಿಡುಗಡೆ ನಿರಂತರವಾಗಿ ಮುಂದೂಡಲ್ಪಟ್ಟ ಪರಿಣಾಮ ಸಂಕಷ್ಟಕ್ಕೆ ಸಿಲುಕಿದ್ದಾರೆ ಎನ್ನಲಾಗಿದೆ.

ಮೂಲಗಳ ಪ್ರಕಾರ, ಸಿನಿಮಾ ಬಿಡುಗಡೆ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ಕೆಲವು ವಿತರಕರಿಗೆ ಹಣವನ್ನು ಮರುಪಾವತಿಸುವ ಪ್ರಕ್ರಿಯೆಯೂ ನಡೆದಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಆದರೆ ಈ ಕುರಿತು ಚಿತ್ರತಂಡ ಅಥವಾ ನಿರ್ಮಾಣ ಸಂಸ್ಥೆಯಿಂದ ಯಾವುದೇ ಅಧಿಕೃತ ಸ್ಪಷ್ಟನೆ ಲಭ್ಯವಾಗಿಲ್ಲ.

**ಕನ್ನಡಿಗರ ಭಾವನೆಗಳ ಪ್ರಶ್ನೆ:** ಕನ್ನಡಪರ ಸಂಘಟನೆಗಳ ಅಭಿಪ್ರಾಯದ ಪ್ರಕಾರ, ಇದು ಕೇವಲ ಸಿನಿಮಾ ವಿಚಾರವಲ್ಲ. ಮೇಕೆದಾಟು ಸೇರಿದಂತೆ ಕರ್ನಾಟಕದ ಹಿತಾಸಕ್ತಿಗೆ ಸಂಬಂಧಿಸಿದ ವಿಷಯಗಳಲ್ಲಿ ವಿರೋಧ ವ್ಯಕ್ತಪಡಿಸುವ ರಾಜಕೀಯ ನಾಯಕರ ವಿರುದ್ಧ ಜನಾಭಿಪ್ರಾಯ ವ್ಯಕ್ತಪಡಿಸುವ ಪ್ರಯತ್ನವಾಗಿದೆ.

ಹಿಂದೆಯೂ ಕನ್ನಡಪರ ಸಂಘಟನೆಗಳು ರಾಜ್ಯದ ಹಿತಾಸಕ್ತಿಗೆ ವಿರುದ್ಧವಾದ ಹೇಳಿಕೆಗಳ ಹಿನ್ನೆಲೆಯಲ್ಲಿ ಕೆಲವು ಸಿನಿಮಾಗಳ ಬಿಡುಗಡೆಗೆ ವಿರೋಧ ವ್ಯಕ್ತಪಡಿಸಿದ್ದ ಉದಾಹರಣೆಗಳಿವೆ. ಇದೇ ರೀತಿಯ ನಿಲುವು ಈಗ 'ಜನನಾಯಗನ್' ಚಿತ್ರದ ವಿರುದ್ಧವೂ ವ್ಯಕ್ತವಾಗುತ್ತಿದೆ.

**ಬಿಡುಗಡೆ ದಿನಾಂಕದ ಮೇಲೆ ಕುತೂಹಲ:** ಸದ್ಯ 'ಜನನಾಯಗನ್' ಸಿನಿಮಾ ಬಿಡುಗಡೆಯ ಕುರಿತಾಗಿ ಸಿನಿಪ್ರೇಮಿಗಳಲ್ಲಿ ಭಾರೀ ನಿರೀಕ್ಷೆ ಇದೆ. ವಿಜಯ್ ಅವರ ರಾಜಕೀಯ ಜೀವನದ ಬಳಿಕ ಬರುತ್ತಿರುವ ಪ್ರಮುಖ ಚಿತ್ರವಾಗಿರುವುದರಿಂದ ತಮಿಳು ಮಾತ್ರವಲ್ಲದೆ ಕರ್ನಾಟಕದಲ್ಲಿಯೂ ದೊಡ್ಡ ಮಟ್ಟದ ಕುತೂಹಲ ನಿರ್ಮಾಣವಾಗಿದೆ.

ಆದರೆ ಮೇಕೆದಾಟು ವಿವಾದ, ಕನ್ನಡಪರ ಸಂಘಟನೆಗಳ ವಿರೋಧ ಹಾಗೂ ರಾಜಕೀಯ ಬೆಳವಣಿಗೆಗಳ ನಡುವೆಯೇ ಸಿನಿಮಾ ಬಿಡುಗಡೆ ಆಗುತ್ತದೆಯೇ ಅಥವಾ ಮತ್ತೊಮ್ಮೆ ಮುಂದೂಡಿಕೆಯಾಗುತ್ತದೆಯೇ ಎಂಬ ಪ್ರಶ್ನೆ ಈಗ ಉದ್ಭವಿಸಿದೆ.



## ನಿರ್ಮಾಪಕರ ವಿರುದ್ಧ ನಟ ಸುದೀಪ್ ಮಾನನಷ್ಟ ಮೊಕದ್ದಮೆ ಕೇಸ್; ಜು.18ಕ್ಕೆ ವಿಚಾರಣೆ ಮುಂದೂಡಿಕೆ



**ಬೆಂಗಳೂರು:** ನಿರ್ಮಾಪಕರಾದ ಎಂ.ಎನ್. ಕುಮಾರ್ ಹಾಗೂ ಸುರೇಶ್ ವಿರುದ್ಧ ನಟ ಕಿಚ್ಚ ಸುದೀಪ್ ದಾಖಲಿಸಿರುವ ಮಾನನಷ್ಟ ಮೊಕದ್ದಮೆ ಪ್ರಕರಣದ ವಿಚಾರಣೆ ಮತ್ತೆ ಮುಂದೂಡಿಕೆಯಾಗಿದ್ದು, ಮುಂದಿನ ವಿಚಾರಣೆ ಯನ್ನು ಜುಲೈ 18ಕ್ಕೆ ನಿಗದಿಪಡಿಸಲಾಗಿದೆ.

2023ರಲ್ಲಿ ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದ ಈ ವಿವಾದದಲ್ಲಿ, ನಿರ್ಮಾಪಕರಾದ ಎಂ.ಎನ್. ಕುಮಾರ್ ಮತ್ತು ಸುರೇಶ್ ಅವರು ನಟ ಸುದೀಪ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದರು. ಸಿನಿಮಾ ಕಾಲ್‌ಶೀಟ್ ನೀಡು ವುದಾಗಿ ಭರವಸೆ ನೀಡಿ ಹಣ ಪಡೆದು ಬಳಿಕ ಸಿನಿಮಾ ಮಾಡದೇ ವಂಚಿಸಿದ್ದಾರೆ ಎಂದು ಸಾರ್ವಜನಿಕವಾಗಿ ಆರೋಪಿಸಿದ್ದರು. ಈ ಹೇಳಿಕೆಗಳು ತಮ್ಮ ವ್ಯಕ್ತಿತ್ವ ಹಾಗೂ ವೃತ್ತಿಜೀವನದ ಘನತೆಗೆ ಧಕ್ಕೆ ತಂದಿವೆ ಎಂದು ಆರೋಪಿಸಿ ಸುದೀಪ್ ನ್ಯಾಯಾಲಯದ ಮೆಟ್ಟಿ ಲೇರಿದ್ದರು.

ಈ ಹಿನ್ನೆಲೆಯಲ್ಲಿ ಇಬ್ಬರು ನಿರ್ಮಾಪಕರ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಿದ್ದ ಸುದೀಪ್, ತಮ್ಮ ವಿರುದ್ಧ ಮಾಡಲಾದ ಆರೋಪಗಳು ಸುಳ್ಳು ಹಾಗೂ ಆಧಾರರಹಿತವಾಗಿವೆ ಎಂದು ಅರ್ಜಿಯಲ್ಲಿ ಉಲ್ಲೇಖಿಸಿದ್ದರು. ಪ್ರಕರಣ ದಾಖಲಾಗಿದಾಗಿನಿಂದಲೂ ಇದು ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಚರ್ಚೆಗೆ ಕಾರಣವಾಗಿತ್ತು.

ಪ್ರಕರಣದ ಭಾಗವಾಗಿ ಇಂದು ಬೆಂಗಳೂರಿನ 7ನೇ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ನ್ಯಾಯಾ ಲಯದಲ್ಲಿ ಕ್ರಾಸ್ ಎಕ್ಸಾಮಿ ನೇಷನ್ ನಡೆಯಬೇಕಿತ್ತು. ಈ ವೇಳೆ ನಟ ಸುದೀಪ್ ಖುದ್ದು ನ್ಯಾಯಾಲಯಕ್ಕೆ ಹಾಜರಾಗುವ ನಿರೀಕ್ಷೆ ಇತ್ತು. ಆದರೆ ವೃತ್ತಿಪರ ಕೆಲಸ ಹಾಗೂ ಪೂರ್ವನಿಗದಿತ ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ ನ್ಯಾಯಾಲಯಕ್ಕೆ ಹಾಜರಾಗಲು ಸಾಧ್ಯವಾಗದ ಕಾರಣ, ಸುದೀಪ್ ಪರ ವಕೀಲರು ವೈಯಕ್ತಿಕ ಹಾಜರಾತಿಯಿಂದ ವಿನಾಯಿತಿ ನೀಡುವಂತೆ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿದರು.

ಮನವಿಯನ್ನು ಪರಿಗಣಿಸಿದ ನ್ಯಾಯಾಲಯ, ಸುದೀಪ್ ಅವರ ಗೈರುಹಾಜರಾತಿಯನ್ನು ಮಾನ್ಯ ಮಾಡಿ ಇಂದಿನ ವಿಚಾರಣೆಗೆ ವಿನಾಯಿತಿ ನೀಡಿದೆ. ಅಲ್ಲದೆ ಪ್ರಕರಣದ ಮುಂದಿನ ವಿಚಾರಣೆಯನ್ನು ಜುಲೈ 18ಕ್ಕೆ ಮುಂದೂಡಿ ಆದೇಶಿಸಿದೆ.

ಸದ್ಯ ಪ್ರಕರಣದ ವಿಚಾರಣೆ ನ್ಯಾಯಾಲಯದಲ್ಲಿ ಮುಂದುವರಿಯುತ್ತಿದ್ದು, ಎರಡೂ ಪಕ್ಷಗಳ ವಾದ–ಪ್ರತಿವಾದಗಳ ಬಳಿಕ ಮುಂದಿನ ಕಾನೂನು ಪ್ರಕ್ರಿಯೆ ನಡೆಯಲಿದೆ. ಚಿತ್ರರಂಗದಲ್ಲಿ ಸಾಕಷ್ಟು ಗಮನ ಸೆಳೆದಿರುವ ಈ ಪ್ರಕರಣದ ಮುಂದಿನ ಬೆಳವಣಿಗೆಗಳತ್ತ ಸಿನಿಪ್ರೇಮಿಗಳು ಹಾಗೂ ಚಿತ್ರರಂಗದ ವಲಯ ಕುತೂಹಲದಿಂದ ಗಮನ ಹರಿಸಿದ್ದಾರೆ.